# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಅಂಗವಿಕಲ ವ್ಯಕ್ತಿಗಳ ಹಕ್ಕುಗಳು ಅಧಿನಿಯಮ-2016ರಡಿ ಅಂಗವಿಕಲ ವ್ಯಕ್ತಿಗಳಿಗೆ ಕಲ್ಪಿಸಿರುವ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಪರವಾಗಿ ನೋಡಲ್ ಅಧಿಕಾರಿಯನ್ನು ನೇಮಿಸುವ ಬಗ್ಗೆ

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 314 ಸೆನೆನಿ 2017, ಬೆಂಗಳೂರು, ದಿನಾಂಕ: 30/06/2017**

**ಪ್ರಸ್ತಾವನೆ:**

ಅಂಗವಿಕಲ ವ್ಯಕ್ತಿಗಳ ಹಕ್ಕುಗಳು ಅಧಿನಿಯಮ-2016ರಡಿ ಕಲ್ಪಿಸಿರುವ ಸೌಲಭ್ಯಗಳನ್ನು ಅಂಗವಿಕಲ ವ್ಯಕ್ತಿಗಳಿಗೆ ಪರಿಣಾಮಕಾರಿಯಾಗಿ ತಲುಪಿಸುವ ಕಾರ್ಯನಿರ್ವಹಣೆಯ ಮೇಲುಸ್ತುವಾರಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ವತಿಯಿಂದ ಉಪ ಕಾರ್ಯದರ್ಶಿಗಿಂತ ಕಡಿಮೆ ಇಲ್ಲದ ನೋಡಲ್ ಅಧಿಕಾರಿಯನ್ನು ನೇಮಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಕೋರಲಾಗಿರುತ್ತದೆ. ಅದರಂತೆ ಪರಿಶೀಲಿಸಿ, ಕೆಳಕಂಡಂತೆ ನೋಡಲ್ ಅಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿದೆ.

## ಆದೇಶ

ಅಂಗವಿಕಲ ವ್ಯಕ್ತಿಗಳ ಹಕ್ಕುಗಳು ಅಧಿನಿಯಮ-2016ರಡಿ ಅಂಗವಿಕಲ ವ್ಯಕ್ತಿಗಳಿಗೆ ಕಲ್ಪಿಸಿರುವ ಸೌಲಭ್ಯಗಳನ್ನು ಅರ್ಹ ಅಂಗವಿಕಲ ವ್ಯಕ್ತಿಗಳಿಗೆ ಪರಿಣಾಮಕಾರಿಯಾಗಿ ತಲುಪಿಸುವ ಕಾರ್ಯನಿರ್ವಹಣೆಯ ಮೇಲುಸ್ತುವಾರಿಗಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ **ಸೇವಾನಿಯಮಗಳು ವಿಭಾಗದ ಸರ್ಕಾರದ ಉಪ ಕಾರ್ಯದರ್ಶಿ-1 ರವರನ್ನು** ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಪರವಾಗಿ **ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Gayathri. M.R 30.06.17

(ಗಾಯತ್ರಿ ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ರವರಿಗೆ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 50 ಪ್ರತಿಗಳನ್ನು ಒದಗಿಸಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು
3. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
5. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು
6. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021
7. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
8. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
9. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
10. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
11. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
12. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು (*ಮುಖ ಪತ್ರದೊಂದಿಗೆ)